ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ನೋಡೆಲ್ ಅಧಿಕಾರಿಗಳು/ಸಹಾಯಕ ಅಭಿಯಂತರರ ಕಛೇರಿ ನಾಗಪುರ ಉಪವಿಭಾಗ, ಬಿ.ಬಿ.ಎಂ.ಪಿ.,
12ನೇ ಮುಖ್ಯರಸ್ತೆ, 11ನೇ ಕ್ರಾಸ್, ನಾಗಪುರ, ಬಿಬಿಎಂಪಿ ಕಛೇರಿ ಸಂಕೀರ್ಣ ಕಟ್ಟಡ, ಮಹಾಲಕ್ಷ್ಮೀಲೇಔಟ್,ಬೆಂಗಳೂರು-86,

# ದಿನಾಂಕ:-07-08-2021ರಂದು ನಡೆದ ವಾರ್ಡ್ ಸಂಖ್ಯೆ:67ರ ವಾರ್ಡ್ ಸಮಿತಿ ಸಭೆಯ ನಡವಳಿ

ಉಲ್ಲೇಖ:- (1) ಸಮಿತಿ ಸಭೆ ಸೂಚಿ ಪತ್ರ ಸಂಖ್ಯ :ಬಿ12(5)/ಪಿಆರ್/35/2020-21 ದಿನಾಂಕ:21:09:2020
(2)ಸಭೆ ಸೂಚನಾ ಪತ್ರ ಸಂ. ಸ.ಅ./ವಾ-67/ಪಿ.ಆರ್./25/2021-22 ದಿನಾಂಕ:04-08-2021

| ಕ್ರ.ಸ. | ಶ್ರೀಯುತರ ಹೆಸರು | ಹುದ್ದೆ |
|---|---|---|
| 1. | ಶ್ರೀ. ವಿಶ್ವನಾಥ್ | ಮುಖ್ಯ ಅಭಿಯಂತರರು (ಪಶ್ಚಿಮ) ಬಿಬಿಎಂಪಿ ನೋಡೆಲ್ ಅಧಿಕಾರಿಗಳು ಹಾಗೂ ವಾರ್ಡ್ ಸಮಿತಿ ಅಧ್ಯಕ್ಷರು, ವಾರ್ಡ್ ಸಂಖ್ಯೆ:67 |
| 2. | ಶ್ರೀ ಬಿ.ಸಿ ರವಿಕುಮಾರ್ | ಸಹಾಯಕ ಅಭಿಯಂತರರು ವಾರ್ಡ್-67 ಹಾಗು ಸಮಿತಿ ಕಾರ್ಯದರ್ಶಿಗಳು |
| 3. | ಶ್ರೀಮತಿ. ಗೀತಾ ಕೀನಾಲ್ | ವಾರ್ಡ್ ಸಮಿತಿ ಸದಸ್ಯರು |
| 4. | ಶ್ರೀಮತಿ. ಮಂಜುಳಾ | ವಾರ್ಡ್ ಸಮಿತಿ ಸದಸ್ಯರು |
| 5. | ಶ್ರೀ ಉದಯ ಶಂಕರ್ | 1ನೇ ಆರ್ ಬ್ಲಾಕ್ ನಿವಾಸಿಗಳ ಕ್ಷೇಮಾಭಿವೃಧಿ ಸಂಘ |
| 6. | ಶ್ರೀ ಗಂಗಹನುಮಯ್ಯ | ವಾರ್ಡ್ ಸಮಿತಿ ಸದಸ್ಯರು. |
| 7. | ಶ್ರೀ. ಛಾಯಾಪತಿ | ಕಿರಿಯ ಆರೋಗ್ಯ ಪರೀವಿಕ್ಷಕರು. ವಾರ್ಡ್-67(ಪ್ರಭಾರ) |
| 8. | ಶ್ರೀ. ಎಚ್ ಎಮ್ ಗಂಗಯ್ಯ | ಹಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್-67 |
| 9. | ಶ್ರೀ. ರಾಜ್‌ಗೋಪಾಲ್ | ಕಂದಾಯ ಪರೀವಿಕ್ಷಕರು-ವಾರ್ಡ್- 67 |
| 10. | ಶ್ರೀ. ಪ್ರವೀಣ್ ಬಿ ಪಾಟೀಲ್ | ಸಂಚಾರಿ ಪೋಲಿಸ್ ಕಾನ್ಸಟೆಬಲ್, ರಾಜಾಜಿನಗರ ಪೊಲೀಸ್ ಠಾಣೆ |
| 11. | ಶ್ರೀ. ರಾಜೇಶ್ | ವಾರ್ಡ್ ಮಾರ್ಷಲ್ -67 |
| 12. | ಶ್ರೀ. ಮಂಜುನಾಥ್ | ತೋಟಗಾರಿಕೆ ಇಲಾಕೆ (ಮೇಸ್ತ್ರೀ) |
| 13. | ಶ್ರೀ. ಮಂಜು | ಸಹಾಯಕ ಪೋಲಿಸ್ ಇನ್ಸಪೆಕ್ಟರ್ ರಾಜಾಜಿನಗರ ಪೋಲಿಸ್ ಠಾಣೆ |
| 14. | ಶ್ರೀ. ಬೈರಪ್ಪ | ಸಹಾಯಕ ಪೋಲಿಸ್ ಇನ್ಸಪೆಕ್ಟರ್ ಮಹಾಲಕ್ಷ್ಮೀಪುರಂ ಪೋಲಿಸ್ ಠಾಣೆ |
| 15. | ಶ್ರೀ. ಸೋಮನಾಥ್ | ಸಹಾಯಕ ಅಭಿಯಂತರರು ಬೆಂ.ಜ.ಮಂ |



ಪು.ತಿ.ನೋ.

Scanned by CamScanner

ವಾರ್ಡ್ ಸಮಿತಿ ಸಭೆಯ ಕಾರ್ಯದರ್ಶಿಗಳು ಮಾತನಾಡಿ ಆಗಸ್ಟ್ ಮಾಹೆಯ ಮೊದಲನೇ ಶನಿವಾರ ದಿ:07/08/2021ರಂದು ಬೆಳಿಗ್ಗೆ 9.30 ಘಂಟೆಗೆ ವಾರ್ಡ್ ಸಮಿತಿ ಸಭೆಯನ್ನು ಕರೆಯಲಾಗಿದ್ದು, ವಾರ್ಡ್ ಅಭಿವೃದ್ಧಿ ಹಾಗೂ ಕುಂದುಕೊರತೆಗಳ ಬಗ್ಗೆ ಚರ್ಚಿಸಲು ಕರೆದಿರುವ ಸಭೆಗೆ ಆಗಮಿಸಿರುವ ಮಾನ್ಯ ವಾರ್ಡ್ ಸಮಿತಿ ಅಧ್ಯಕ್ಷರು, ಮತ್ತು ಸಮಿತಿ ಸದಸ್ಯರಿಗೆ ಸ್ವಾಗತ ಕೋರಿದರು. ಹಾಗೂ ವಾರ್ಡ್ ಸಂಖ್ಯೆ:67ರ ವಾಸ್ತವದ ಬಗ್ಗೆ ಕಿರು ಪರಿಚಯವನ್ನು ಮಂಡಿಸಿದರು.

ಮಾನ್ಯ ವಾರ್ಡ್ ಸಮಿತಿ ಅಧ್ಯಕ್ಷರು, ಮಾತನಾಡಿ ಸಮಿತಿಯ ಸದಸ್ಯರು ಮತ್ತು ಸ್ಥಳೀಯ ಸಾರ್ವಜನಿಕರು ತಮ್ಮ ತಮ್ಮ ಅವಹಾಲುಗಳನ್ನು ತಿಳಿಸಬೇಕೆಂದು ತಿಳಿಸಿದ ಹಿನ್ನೆಲೆಯಲ್ಲಿ ಸಮಿತಿಯ ಸದಸ್ಯರು ಈ ಕೆಳಕಂಡಂತೆ ವಾರ್ಡ್‌ನಲ್ಲಿ ಕಂಡುಬಂದಿರುವ ಸಮಸ್ಯೆಗಳನ್ನು ಸಭೆಗೆ ಮಂಡಿಸಿದರು.

**ಸಭೆಯಲ್ಲಿ ಚರ್ಚಿಸಲಾದ ವಿಷಯಗಳು:**

| | |
|---|---|
| ಉದಯ ಶಂಕರ್<br>ವಾರ್ಡ್ ಸಮಿತಿ ಸದಸ್ಯರು | 20ನೇ 'ಎ' ಮೈನ್‌ನಲ್ಲಿ ರಸ್ತೆಯಲ್ಲಿ ಗುಂಡಿಯಾಗಿದೆ ವಾಹನ ಸವಾರರಿಗೆ ಹಾಗು ಪಾದಚಾರಿಗಳಿಗೆ ತೊಂದರೆ ಉಂಟಾಗುತ್ತಿದೆ. |
| ಶ್ರೀ ಬಿ.ಸಿ ರವಿಕುಮಾರ್<br>ಸಹಾಯಕ ಅಭಿಯಂತರರು<br>ವಾರ್ಡ್–67 | ವಾರ್ಡ್ ಸಮಿತಿ ಸದಸ್ಯರ ದೂರಿಗೆ ಸಂಭಂದಿಸಿದಂತೆ ಕ್ರಮವಹಿಸಲಾಗುವುದಾಗಿ ಸಭೆಗೆ ಭರವಸೆ ನೀಡುತ್ತ ಮುಂದಿನ 3 ದಿವಸಗಳೊಗಾಗಿ ರಸ್ತೆ ಗುಂಡಿ ಮುಚ್ಚಿಸುವುದಾಗಿ ತಿಳಿಸಿದರು. |
| ಶ್ರೀ.ವಿಶ್ವನಾಥ್<br>ನೋಡೆಲ್ ಅಧಿಕಾರಿಗಳು | ವಾರ್ಡ್‌ನಲ್ಲಿ ಒ.ಎಫ್.ಸಿ ಕೇಬಲ್ ಅಳವಡಿಸಲು ಕಾಸಗಿ ಕಂಪನಿಯವರು ರಸ್ತೆ ಅಗೆದು ದುರಸ್ತಿ ಮಾಡದೆ ಹಾಗೆ ಬಿಟ್ಟಿರುತ್ತಾರೆ ಅವರ ವಿರುದ್ಧ ಕ್ರಮವಹಿಸಲು ಸಹಾಯಕ ಅಭಿಯಂತರರಿಗೆ ಸೂಚಿಸಿದರು. |
| ಶ್ರೀ ಗಂಗಹನುಮಯ್ಯ<br>ವಾರ್ಡ್ ಸಮಿತಿ ಸದಸ್ಯರು. | ವಾರ್ಡ್‌ನ 11ನೇ ಕ್ರಾಸ್‌ನಲ್ಲಿ ಒ.ಎಫ್.ಸಿ ಕೇಬಲ್ ಅಳವಡಿಸಲು ರಸ್ತೆ ಅಗೆದು ದುರಸ್ತಿ ಮಾಡದೆ ಹಾಗೆ ಬಿಟ್ಟಿರುತ್ತಾರೆ ಪಾದಚಾರಿಗಳಿಗೆ ಹಾಗು ವಾಹನ ಸವಾರರಿಗೆ ತುಂಬ ತೊಂದರೆ ಉಂಟಾಗುತ್ತಿದೆ. |
| ಶ್ರೀ ಬಿ.ಸಿ ರವಿಕುಮಾರ್<br>ಸಹಾಯಕ ಅಭಿಯಂತರರು<br>ವಾರ್ಡ್–67 | ವಾರ್ಡ್‌ನ ನೋಡೆಲ್ ಅಧಿಕಾರಿಗಳು ಹಾಗು ವಾರ್ಡ್‌ನ ಸಮಿತಿ ಸದಸ್ಯರ ದೂರಿಗೆ ಸಂಭಂದಿಸಿದಂತೆ ಈಗಾಗಲೆ ಆ ಕಾಸಗಿ ಕಂಪನಿಯವರ ವಿರುದ್ದ ಪೋಲಿಸ್ ಠಾಣೆಯಲ್ಲಿ ದೂರು ನೀಡಲಾಗಿದೆ ಹಾಗು ಅವರು ಅನಧೀಕೃತವಾಗಿ ರಸ್ತೆ ಅಗಿಯುವುದನ್ನು ನಿಲ್ಲಿಸಲಾಗಿದೆ, ಮತ್ತು ರಸ್ತೆ ದೂರಸ್ತಿ ಮಾಡದೆ ಹಾಗೆ ಬಿಟ್ಟಿರುವ ರಸ್ತೆಗಳಿಗೆ ಡಾಂಬರಿಕರಣ (ಪ್ಯಾಚ್ ವರ್ಕ್) ಮಾಡಲು ಸೂಚಿಸಲಾಗಿದೆ ಎಂದು ಸಭೆಗೆ ಮಾಹಿತ ಒದಗಿಸಿದರು. |
| ಶ್ರೀ.ವಿಶ್ವನಾಥ್<br>ನೋಡೆಲ್ ಅಧಿಕಾರಿಗಳು | ವಾರ್ಡ್‌ನ ಕೇತ್‌ಮಾರನಹಳ್ಳಿಯ ಎಸ್.ಬಿ.ಐ ಬ್ಯಾಂಕ್ ಎದುರು ಸಾರ್ವಜನಿಕರು ಕಸ ತಂದು ಎಲ್ಲೆಂದರಲ್ಲಿ ಹಾಕುತ್ತಿದ್ದಾರೆ ವಾರ್ಡ್‌ನ ಮಾರ್ಷಲ್ ಕ್ರಮ ತೆಗೆದುಕೊಳಲು ಸೂಚಿಸಿದರು. |
| ಶ್ರೀ. ರಾಜೇಶ್<br>ವಾರ್ಡ್ ಮಾರ್ಷಲ್ –67 | ವಾರ್ಡ್‌ನ ನೋಡೆಲ್ ಅಧಿಕಾರಿಗಳ ದೂರಿಗೆ ಸಂಭಂದಿಸಿದಂತೆ ಎಲ್ಲೆಂದರಲ್ಲಿ ಕಸ ಹಾಕುತ್ತಿರುವ ಸಾರ್ವಜನಿಕರಿಗೆ ದಂಡ ಹಾಕಲಾಗುವುದು ಹಾಗು ಪ್ಯಾಟ್ರೋಲಿಂಗ್ ಮಾಡಲಾಗುವುದಾಗಿ ಸಭೆಗೆ ಭರವಸೆ ನೀಡಿದರು. |
| ಶ್ರೀಮತಿ. ಗೀತಾ ಕೀನಾಲ್<br>ವಾರ್ಡ್ ಸಮಿತಿ ಸದಸ್ಯರು | 19ನೇ 'ಎಫ್' ಮೈನ್‌ನಲ್ಲಿ ರಸ್ತೆಯಲ್ಲಿ ಗುಂಡಿಯಾಗಿದೆ (ಉದಯ ಕುಮಾರ್ ಪಾರ್ಕ್ ಹತ್ತಿರ) ವಾಹನ ಸವಾರರಿಗೆ ಹಾಗು ಪಾದಚಾರಿಗಳಿಗೆ ತೊಂದರೆ ಉಂಟಾಗುತ್ತಿದೆ. |
| ಶ್ರೀ ಬಿ.ಸಿ ರವಿಕುಮಾರ್<br>ಸಹಾಯಕ ಅಭಿಯಂತರರು<br>ವಾರ್ಡ್–67 | ವಾರ್ಡ್ ಸಮಿತಿ ಸದಸ್ಯರ ದೂರಿಗೆ ಸಂಭಂದಿಸಿದಂತೆ ಕ್ರಮವಹಿಸಲಾಗುವುದಾಗಿ ಸಭೆಗೆ ಭರವಸೆ ನೀಡಿದರು. |

ಪು.ತಿ.ನೋ.



Scanned by CamScanner

| | |
|---|---|
| ಶ್ರೀಮತಿ. ಮಂಜುಳಾ<br>ವಾರ್ಡ್ ಸಮಿತಿ ಸದಸ್ಯರು | ವಾರ್ಡ್‌ನ ಕೇತಮಾರನಹಳ್ಳಿ ಹತ್ತಿರ ಎಸ್.ಬಿ.ಐ ಬ್ಯಾಂಕ್ ಎದುರು ಬೀದಿ ದೀಪ ಉರಿಯುತ್ತಿಲ್ಲ ಎಂದು ಸಭೆಯಲ್ಲಿ ಪ್ರಸ್ತಾಪಿಸಿದರು. |
| ಶ್ರೀ.ವಿಶ್ವನಾಥ್<br>ನೋಡೆಲ್ ಅಧಿಕಾರಿಗಳು | ವಾರ್ಡ್ ಸಮಿತಿ ಸದಸ್ಯರ ದೂರಿಗೆ ಸಂಭಂದಿಸಿದಂತೆ ಬೀದಿ ದೀಪ ಗುತ್ತಿಗೆದಾರರ ಸಭ್ಭಂದಿಗೆ ಕ್ರಮವಹಿಸಲು ಸೂಚಿಸಿದರು. |
| ಶ್ರೀಮತಿ. ಗೀತಾ ಕೀನಾಲ್<br>ವಾರ್ಡ್ ಸಮಿತಿ ಸದಸ್ಯರು | ವಾರ್ಡ್‌ನ ರಾಜಾಜಿನಗರ 19ನೇ 'ಎಫ್' ಮೈನ್‌ನಲ್ಲಿ ಕೇಬಲ್‌ಗಳು ರಸ್ತೆಗೆ ಹಾಗು ಪಾದಚಾರಿ ಮಾರ್ಗ ಅಡಲಾಗಿ ಬಿದ್ದಿರುತ್ತವೆ ಇದರಿಂದ ಪಾದಚಾರಿಗಳಿಗೆ ಹಾಗು ವಾಹನ ಸವಾರರರಿಗೆ ತೊಂದರೆ ಉಂಟಾಗುತ್ತಿರುತ್ತದೆ. |
| ಶ್ರೀ ಬಿ.ಸಿ ರವಿಕುಮಾರ್<br>ಸಹಾಯಕ ಅಭಿಯಂತರರು<br>ವಾರ್ಡ್–67 | ವಾರ್ಡ್ ಸಮಿತಿ ಸದಸ್ಯರ ದೂರಿಗೆ ಸಂಭಂದಿಸಿದಂತೆ ಕೇಬಲ್‌ಗಳನ್ನು ತೆರವುಗೋಳಿಸಲು ಕ್ರಮವಹಿಸಲಾಗುವುದಾಗಿ ಸಭೆಗೆ ಭರವಸೆ ನೀಡಿದರು. |
| ಶ್ರೀ.ವಿಶ್ವನಾಥ್<br>ನೋಡೆಲ್ ಅಧಿಕಾರಿಗಳು | ವಾರ್ಡ್‌ನ ನಳಪಾಕ ಹೋಟಲ್ ರಸ್ತೆಯಲ್ಲಿ ಒಳಚರಂಡಿ ಮ್ಯಾನ್‌ಹೋಲ್ ತುಂಬಿ ಹರಿಯುತ್ತಿರುತ್ತದೆ ಇದರಿಂದ ಬಹಳಷ್ಟು ತೊಂದರೆ ಉಂಟಾಗುತ್ತಿರುತ್ತದೆ ದುರ್ವಾಸನೆ ಬೀರುತ್ತಿರುತ್ತದೆ ಶುಚಿಗೊಳಿಸಲು ಸೂಚಿಸಿದರು. |
| ಶ್ರೀ. ಸೋಮನಾಥ್<br>ಸಹಾಯಕ ಅಭಿಯಂತರರು<br>ಬೆಂ.ಜ.ಮಂ | ವಾರ್ಡ್‌ನ ನೋಡೆಲ್ ಅಧಿಕಾರಿಗಳ ದೂರಿಗೆ ಸಂಭಂದಿಸಿದಂತೆ ನಳಪಾಕ ಹೋಟಲ್ ರಸ್ತೆಯಲ್ಲಿ ಕೆಲವು ಮನೆಗಳಲ್ಲಿ ಸ್ಟ್ರಾಂಮ್ ವಾಟರ್ ಅನ್ನು ಒಳಚರಂಡಿ ಪೈಪ್‌ಲೈನ್‌ಗೆ ಕನೇಕ್ಷನ್ ಕೊಟ್ಟಿರುವುದರಿಂದ ಮ್ಯಾನ್ ಹೋಲ್ ಉಕ್ಕುತ್ತಿರುತ್ತದೆ. |
| ಶ್ರೀಮತಿ. ಗೀತಾ ಕೀನಾಲ್<br>ವಾರ್ಡ್ ಸಮಿತಿ ಸದಸ್ಯರು | ವಾರ್ಡ್‌ನ ಕೇತ್‌ಮಾರನಹಳ್ಳಿಯಲ್ಲಿ ಮುಂದಿನ ವ್ಯಾಕ್ಸಿನೇಷನ್ ಡ್ರೈವ್ ಮಾಡುವ ಬಗ್ಗೆ ಮಾಹಿತಿ ಪಡೆದುಕೊಂಡರು. |
| ಶ್ರೀ. ಎಚ್ ಎಮ್ ಗಂಗಯ್ಯ<br>ಹಿರಿಯ ಆರೋಗ್ಯ<br>ಪರಿವೀಕ್ಷಕರು, ವಾರ್ಡ್– 67 | ವಾರ್ಡ್‌ನ ಕೇತ್‌ಮಾರನಹಳ್ಳಿಯಲ್ಲಿ ಈಗಾಗಲೆ ಹಲಾವಾರು ಬಾರಿ ವ್ಯಾಕ್ಸಿನೇಷನ್ ಡ್ರೈವ್ ಮಾಡಲಾಗುತ್ತಿದೆ, ಮತ್ತು ಮುಂದಿನ ವಾರ ಮತ್ತೆ ವ್ಯಾಕ್ಸಿನೇಷನ್ ಡ್ರೈವ್ ಅನ್ನು ಆಯೋಜಿಸಲಾಗಿದೆ ಎಂದು ಸಭೆಗೆ ಮಾಹಿತಿ ಒದಗಿಸಿದರು. |
| ಶ್ರೀ ಗಂಗಹನುಮಯ್ಯ<br>ವಾರ್ಡ್ ಸಮಿತಿ ಸದಸ್ಯರು. | ವಾರ್ಡ್‌ನ 5ನೇ ಮೈನ್‌ನ ಪ್ರಗತಿ ನರಸಿಂಗ್ ಹೋಮ್ ಎದುರು ಡೇಬ್ರೀಸ್ ತೆರವುಗೋಳಿಸಬೇಕು ಹಾಗು ಅಬಾಂಡೆಡ್(ಪೋಲಿಸರು ವಶಕ್ಕೆ ಪಡೆದ ವಾಹನ) ಗಾಡಿಗಳನ್ನು ತೆರವುಗೋಳಿಸಬೇಕು. |
| ಶ್ರೀ ಬಿ.ಸಿ ರವಿಕುಮಾರ್<br>ಸಹಾಯಕ ಅಭಿಯಂತರರು<br>ವಾರ್ಡ್–67 | ವಾರ್ಡ್ ಸಮಿತಿ ಸದಸ್ಯರ ದೂರಿಗೆ ಸಂಭಂದಿಸಿದಂತೆ ಡೇಬ್ರೀಸ್ ತೆರವುಗೋಳಿಸುವ ಬಗ್ಗೆ ಕ್ರಮವಹಿಸಲಾಗುವುದಾಗಿ ಸಭೆಗೆ ಭರವಸೆ ನೀಡಿದರು. |
| ಶ್ರೀ.ವಿಶ್ವನಾಥ್<br>ನೋಡೆಲ್ ಅಧಿಕಾರಿಗಳು | ವಾರ್ಡ್‌ನ ಉದಯಕುಮಾರ್ ಉದ್ಯಾನದ ಹತ್ತಿರ ಮರದಿಂದ ಕಾಯಿಗಳು ಬೀಳುತ್ತಿರುವುದರಿಂದ ಪಾದಚಾರಿಗಳಿಗೆ ಹಾಗು ವಾಹನ ನಿಲುಗಡೆ ಮಾಡುತ್ತಿರುವವರಿಗೆ ತೊಂದರೆ ಉಂಟಾಗುತ್ತಿದೆ ಅರಣ್ಯ ಇಲಾಖೆಯವರು ಕಾಯಿಗಳನ್ನು ತೆರವುಗೋಳಿಸಲು ಸೂಚಿಸಿದರು. |
| ಶ್ರೀ. ಪ್ರವೀಣ್ ಬಿ ಪಾಟೀಲ್<br>ಸಂಚಾರಿ ಪೋಲಿಸ್<br>ಕಾನ್ಸಟೆಬಲ್ | ವಾರ್ಡ್‌ನ ಮಹಾಲಕ್ಷ್ಮೀಪುರಂ ಸಿಗ್ನಲ್ ಹತ್ತಿರ ಪಾದಚಾರಿ ಮಾರ್ಗ ಅಡ್ಡಲಾಗಿ ಇರುವ ಮರದ ಬುಡ್ಡೆ ತೆರವುಗೊಳಿಸಬೇಕು ಎಂದು ಸಭೆಯಲ್ಲಿ ಪ್ರಸ್ತಾಪಿಸಿದರು |



ಪು.ತಿ.ನೋ.

Scanned by CamScanner

| | |
|---|---|
| ಶ್ರೀ ಬಿ.ಸಿ ರವಿಕುಮಾರ್<br>ಸಹಾಯಕ ಅಭಿಯಂತರರು<br>ವಾರ್ಡ್–67 | ವಾರ್ಡ್‌ನ ಸಂಚಾರಿ ಪೋಲಿಸ್ ಕಾನ್ಸಟೆಬಲ್ ರವರ ದೂರಿಗೆ ಸಂಭಂದಿಸಿದಂತೆ ಅರಣ್ಯ ಇಲಾಖೆ ಸಿಬ್ಬಂದಿಗೆ ತಿಳಿಸಿ ತೆರವುಗೊಳಿಸುವುದಾಗಿ ಸಭೆಗೆ ತಿಳಿಸಿದರು. |
| ಶ್ರೀ. ಮಂಜುನಾಥ್<br>ತೋಟಗಾರಿಕೆ ಇಲಾಕೆ<br>(ಮೇಸ್ತ್ರೀ) | ವಿಶ್ವೇಶ್ವರಯ್ಯ ಉದ್ಯಾನದಲ್ಲಿ ವಾಕಿಂಗ್ ಟ್ರಯ್ಯಾಕ್‌ನಲ್ಲಿ ದೀಪ ಉರಿಯುತ್ತಿಲ್ಲ. |
| ಶ್ರೀ.ವಿಶ್ವನಾಥ್<br>ನೋಡೆಲ್ ಅಧಿಕಾರಿಗಳು | ವಾರ್ಡ್‌ನ ರಾಜಾಜಿನಗರ 1ನೇ ಬ್ಲಾಕ್‌ನ ಅನನ್ಯ ಆಸ್ಪತ್ರೆ ಎದುರು ರಸ್ತೆಗೆ ಮೇಟಲ್ ಬ್ಯಾರೀಕೇಡಿಂಗ್ ಹಾಕಿ ಸುಗಮ ತಿರುವಿಗೆ ಅವಕಾಶ ಕಲ್ಪಿಸಬೇಕು. |
| ಶ್ರೀ ಬಿ.ಸಿ ರವಿಕುಮಾರ್<br>ಸಹಾಯಕ ಅಭಿಯಂತರರು<br>ವಾರ್ಡ್–67 | ಮಲ್ಲೇಶ್ವರಂ ಸಂಚಾರಿ ಪೋಲಿಸರಿಗೆ ವ್ಯಾಟ್ಸಾಪ್ ಗುಂಪಿನಲ್ಲಿ ಸಮಿತಿ ಸಂದೇಶ ನೀಡಲಾಗಿದ್ದಾಗ್ಯು ಸಭೆಗೆ ಗೈರುಹಾಜರಾಗಿರುತ್ತಾರೆ ಆದರು ಮತ್ತೊಮ್ಮೆ ಸದರಿ ಬ್ಯಾರಿಕೇಡಿಂಗ್ ಸ್ಥಾಪಿಸಲು ಸೂಚಿಸುತ್ತೇನೆ ಎಂದು ಸಭೆಗೆ ತಿಳಿಸಿದರು. |
| ಶ್ರೀ.ವಿಶ್ವನಾಥ್<br>ನೋಡೆಲ್ ಅಧಿಕಾರಿಗಳು | ವಾರ್ಡ್‌ನಲ್ಲಿರುವ ಉದ್ಯಾನಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಬೇವಿನ ಗಿಡಗಳನ್ನು ನೆಟ್ಟು ಬೆಳೆಸಲು ತಿಳಿಸಿದರು. |
| ಶ್ರೀ. ಮಂಜುನಾಥ್<br>ತೋಟಗಾರಿಕೆ ಇಲಾಕೆ<br>(ಮೇಸ್ತ್ರೀ) | ಬೇವಿನ ಗಿಡದ ಸಸಿಗಳನ್ನು ಒದಗಿಸಲು ತೋಟಗಾರಿಕಾ ಅಧೀಕ್ಷಕರು (ಪಶ್ಚಿಮ)ರವರ ಗಮನಕ್ಕೆ ತರಲಾಗುವುದಾಗಿ ಸಭೆಗೆ ತಿಳಿಸಿದರು. |
| ಶ್ರೀ ಗಂಗಹನುಮಯ್ಯ<br>ವಾರ್ಡ್ ಸಮಿತಿ ಸದಸ್ಯರು. | ವಾರ್ಡನ ಘ.ತ್ಯಾ.ನಿ ಸರಭರಾಜುದಾರರಿಗೆ ಜನವರಿ–2021 ಮಾಹೆಯಿಂದ ಇಲಾಖೆ ವತಿಯಿಂದ ಕಸದ ಬಿಲ್ ಪಾವತಿಮಾಡಿರುವುದಿಲ್ಲ, ಹಾಗು ಕೋವಿಡ್–19 (ಸ್ಯಾನಿಟೈಸೇಷನ್ ಹಾಗು ಸೀಲ್‌ಡೌನ್) ಬಿಲ್ ಪಾವತಿಮಾಡಿರುವುದಿಲ್ಲ, ಇದನ್ನು ಕುರಿತು ಪತ್ರವನ್ನು ಸಹ ಹಿರಿಯ ಅಧಿಕಾರಿಗಳಿಗೆ ನೀಡಿರುತ್ತೇನೆ. ಇದರಿಂದ ಘ.ತ್ಯಾ.ನಿ ಗುತ್ತಿಗೆದಾರರಿಗೆ ಬಹಳ ಸಮಸ್ಯೆ ಉಂಟಾಗುತ್ತಿರುವುದಾಗಿ ಸಭೆಯಲ್ಲಿ ಪ್ರಸ್ತಾಪಿಸಿದರು. ವಾರ್ಡ್‌ನ ಸಮಿತಿ ಸದಸ್ಯರು ಈ ಕುರಿತು ಗುತ್ತಿಗೆದಾರರಿಗೆ ಹಣ ಪಾವತಿ ಮಾಡಲು ಮನವಿ ಸಲ್ಲಿಸಿದರು. |

**<u>ಪ್ರತಿಯನ್ನು</u>**

1. ಮಾನ್ಯ ವಲಯ ವಿಶೇಷ ಆಯುಕ್ತರು, ಪಶ್ಚಿಮ ವಲಯ ರವರ ಅವಗಾಹನೆಗೆ ತರಲು ಆಪ್ತ ಕಾರ್ಯದರ್ಶಿರವರಿಗೆ ಸಲ್ಲಿಸಿದೆ.
2. ಮಾನ್ಯ ಜಂಟಿ ಆಯುಕ್ತರು, ಪಶ್ಚಿಮ ವಲಯ ರವರ ಅವಗಾಹನೆಗೆ ತರಲು ಆಪ್ತ ಕಾರ್ಯದರ್ಶಿರವರಿಗೆ ಸಲ್ಲಿಸಿದೆ.
3. ಮಾನ್ಯ ಮುಖ್ಯ ಅಭಿಯಂತರರು, ಪಶ್ಚಿಮ ವಲಯ ರವರ ಅವಗಾಹನೆಗೆ ಸಲ್ಲಿಸಿದೆ.
4. ಮಾನ್ಯ ಆರೋಗ್ಯ ಅಧಿಕಾರಿಗಳು, ಪಶ್ಚಿಮ ವಲಯ ರವರ ಅವಗಾಹನೆಗೆ ತರಲು ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
5. ಮಾನ್ಯ ಅಧೀಕ್ಷಕ ಅಭಿಯಂತರರು, (ಘನತ್ಯಾಜ್ಯ ನಿರ್ವಹಣೆ) ರವರ ಅವಗಾಹನ ಸಲ್ಲಿಸಿದೆ.
6. ಮಾನ್ಯ ಅರಣ್ಯಾಧಿಕಾರಿಗಳು, ಅರಣ್ಯ ವಿಭಾಗ ರವರಿಗೆ ಅವಗಾಹನೆಗೆ ತರಲು ಮತ್ತು ಅಗತ್ಯ ಕ್ರಮಕ್ಕಾಗಿ ಆಪ್ತ ಸಹಾಯಕರವರಿಗೆ ಸಲ್ಲಿಸಿದೆ.
7. ಮಾನ್ಯ ಅಧೀಕ್ಷಕರು, ತೋಟಗಾರಿಕೆ ಇಲಾಖೆ ರವರ ಅವಗಾಹನೆಗೆ ತರಲು ಹಾಗೂ ಅಗತ್ಯ ಕ್ರಮಕ್ಕಾಗಿ ಸಹಾಯಕರಿಗೆ ಸಲ್ಲಿಸಿದೆ.
8. ಆರೋಗ್ಯ ಅಧಿಕಾರಿಗಳು, (ಪಶ್ಚಿಮ ವಲಯ) ರವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
9. ಕಾರ್ಯಪಾಲಕ ಅಭಿಯಂತರರು, ಮಹಾಲಕ್ಷ್ಮೀಪುರಂ ವಿಭಾಗ ರವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
10. ಕಂದಾಯ ಅಧಿಕಾರಿಗಳು, ಮಹಾಲಕ್ಷ್ಮೀಪುರಂ ವಿಭಾಗ ರವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
11. ಸಹಾಯಕ ಕಾರ್ಯಪಾಲಕ ಅಭಿಯಂತರರು ನಾಗಪುರ ಉಪವಿಭಾಗ ರವರಿಗೆ ಸೂಕ್ತ ಕ್ರಮವಹಿಸಲು ಸಲ್ಲಿಸಿದೆ.
12. ಸಹಾಯಕ ಕಂದಾಯ ಅಧಿಕಾರಿಗಳು ನಾಗಪುರ ಉಪವಿಭಾಗ ರವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.

ಪು.ತಿ.ನೋ.



Scanned by CamScanner

13. ಸಹಾಯಕ ಕಾರ್ಯಪಾಲಕ ಅಭಿಯಂತರರು (ಪರಿಸರ ವಿಭಾಗ) ನಾಗಪುರ ಉಪವಿಭಾಗ ರವರ ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
14. ಕಾರ್ಯಪಾಲಕ ಅಭಿಯಂತರರು, ವಿದ್ಯುತ್ ಪಶ್ಚಿಮ ವಿಭಾಗ ರವರಿಗೆ ಸೂಕ್ತ ಕ್ರಮ ವಹಿಸಲು ಸಲ್ಲಿಸಿದೆ.
15. ಎಲ್ಲಾ ಸಂಬಂಧಪಟ್ಟವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
16. ಕಛೇರಿಯ ಕಡತಕ್ಕೆ.

ಕಾರ್ಯದರ್ಶಿ ಹಾಗೂ
ಸಹಾಯಕ ಅಭಿಯಂತರರು, ವಾರ್ಡ್- 67
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಅಧ್ಯಕ್ಷರು ಹಾಗೂ
ನೋಡಲ್ ಅಧಿಕಾರಿಗಳು ವಾರ್ಡ್- 67
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

Scanned by CamScanner

Bruhat Bengaluru Mahanagara Palike

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ನೋಡೆಲ್ ಅಧಿಕಾರಿಗಳು/ಸಹಾಯಕ ಅಭಿಯಂತರರ ಕಛೇರಿ ನಾಗಪುರ ಉಪವಿಭಾಗ, ಬಿ.ಬಿ.ಎಂ.ಪಿ.,

12ನೇ ಮುಖ್ಯರಸ್ತೆ, 11ನೇ ಕ್ರಾಸ್, ನಾಗಪುರ, ಬಿಬಿಎಂಪಿ ಕಛೇರಿ ಸಂಕೀರ್ಣ ಕಟ್ಟಡ, ಮಹಾಲಕ್ಷ್ಮೀಲೇಔಟ್,ಬೆಂಗಳೂರು-86,

# ದಿನಾಂಕ:-21-08-2021ರಂದು ನಡೆದ ವಾರ್ಡ್ ಸಂಖ್ಯೆ:67ರ ವಾರ್ಡ್ ಸಮಿತಿ ಸಭೆಯ ನಡವಳಿ

ಉಲ್ಲೇಖ:- (1) ಸಮಿತಿ ಸಭೆ ಸೂಚಿ ಪತ್ರ ಸಂಖ್ಯೆ :ಬಿ12(5)/ಪಿಆರ್/35/2020-21 ದಿನಾಂಕ:21:09:2020

(2)ಸಭೆ ಸೂಚನಾ ಪತ್ರ ಸಂ. ಸ.ಅ./ವಾ-67/ಪಿ.ಆರ್./26/2021-22 ದಿನಾಂಕ:19-08-2021

| ಕ್ರ.ಸ. | ಶ್ರೀಯುತರ ಹೆಸರು | ಹುದ್ದೆ |
|---|---|---|
| 1. | ಶ್ರೀ. ವಿಶ್ವನಾಥ್ | ಮುಖ್ಯ ಅಭಿಯಂತರರು (ಪಶ್ಚಿಮ) ಬಿಬಿಎಂಪಿ ನೋಡೆಲ್ ಅಧಿಕಾರಿಗಳು ಹಾಗೂ ವಾರ್ಡ್ ಸಮಿತಿ ಅಧ್ಯಕ್ಷರು, ವಾರ್ಡ್ ಸಂಖ್ಯೆ:67 |
| 2. | ಶ್ರೀ ಬಿ.ಸಿ ರವಿಕುಮಾರ್ | ಸಹಾಯಕ ಅಭಿಯಂತರರು ವಾರ್ಡ್-67 ಹಾಗು ಸಮಿತಿ ಕಾರ್ಯದರ್ಶಿಗಳು |
| 3. | ಶ್ರೀಮತಿ. ಗೀತಾ ಕೀನಾಲ್ | ವಾರ್ಡ್ ಸಮಿತಿ ಸದಸ್ಯರು |
| 4. | ಶ್ರೀ ಉದಯ ಶಂಕರ್ | 1ನೇ ಆರ್ ಬ್ಲಾಕ್ ನಿವಾಸಿಗಳ ಕ್ಷೇಮಾಭಿವೃಧಿ ಸಂಘ |
| 5. | ಶ್ರೀ ರಾಮಚಂದ್ರ | 1ನೇ ಎನ್ ಬ್ಲಾಕ್ ನಿವಾಸಿಗಳ ಕ್ಷೇಮಾಭಿವೃಧಿ ಸಂಘ |
| 6. | ಶ್ರೀ ಆಕಾಶ್ | ವಾರ್ಡ್ ಸಮಿತಿ ಸದಸ್ಯರು. |
| 7. | ಶ್ರೀ. ಎಚ್ ಎಮ್ ಗಂಗಯ್ಯ | ಹಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್-67 |
| 8. | ಶ್ರೀ. ಸತೀಶ್ | ಬೀದಿ ದೀಪ ಗುತ್ತಿಗೆದಾರರು. |
| 9. | ಶ್ರೀ. ಮಂಜುನಾಥ್ | ತೋಟಗಾರಿಕೆ ಇಲಾಕೆ (ಮೇಸ್ತ್ರೀ) |
| 10. | ಶ್ರೀ. ಕೆ ಗಂಗಚೆಲುವಯ್ಯ | ಬೆಂಗಳೂರು ಜಲ ಮಂಡಳಿ |
| 11. | ಶ್ರೀ. ಸುರೇಶ್ ಬಾಬು ರಾವ್ | ಸಹಾಯಕ ಪೋಲಿಸ್ ಇನ್ಸಪೆಕ್ಟರ್ ಮಹಾಲಕ್ಷ್ಮೀಪುರಂ ಪೋಲಿಸ್ ಠಾಣೆ |
| 12. | ಶ್ರೀ. ಆನಂದ್ ಮೂರ್ತಿ | ಸಹಾಯಕ ಅಭಿಯಂತರರು, ಬೆಸ್ಕಾಂ |
| 13. | ಶ್ರೀ. ಗುಣಶೇಖರ್ | ಸಹಾಯಕ ಪೋಲಿಸ್ ಇನ್ಸಪೆಕ್ಟರ್ ಸುಬ್ರಮ್ಮಣ್ಯನಗರ ಪೋಲಿಸ್ ಠಾಣೆ |
| 14. | ಶ್ರೀ. ಹುನಿಸ್ವಾಮಯ್ಯ | ಸಹಾಯಕ ಪೋಲಿಸ್ ಇನ್ಸಪೆಕ್ಟರ್ ಮಲ್ಲೇಶ್ವರಂ (ಸಂಚಾರಿ) ಪೋಲಿಸ್ ಠಾಣೆ |
| 15. | ಶ್ರೀ. ಪ್ರಮೋದ್ ಕುಮಾರ್ | ಮಲ್ಲೇಶ್ವರಂ ಸಂಚಾರಿ ಪೋಲಿಸ್ ಠಾಣೆ |



ಪು.ತಿ.ನೋ.

Scanned by CamScanner

| | | |
|---|---|---|
| 16. | ಶ್ರೀ. ನಾಗರಾಜ್ | ಸಹಾಯಕ ಅಭಿಯಂತರರು ಬೆಂ.ಜ.ಮಂ |
| 17. | ಶ್ರೀ. ಮಲ್ಲಯ್ಯ | ಅರಣ್ಯ ಇಲಾಖೆ ಗುತ್ತಿಗೆದಾರರ ಸಿಬ್ಬಂದಿ |

ವಾರ್ಡ್ ಸಮಿತಿ ಸಭೆಯ ಕಾರ್ಯದರ್ಶಿಗಳು ಮಾತನಾಡಿ ಆಗಸ್ಟ್ ಮಾಹೆಯ ಮೂರನೇ ಶನಿವಾರ ದಿ:21/08/2021ರಂದು ಬೆಳಿಗ್ಗೆ 9.30 ಘಂಟೆಗೆ ವಾರ್ಡ್ ಸಮಿತಿ ಸಭೆಯನ್ನು ಕರೆಯಲಾಗಿದ್ದು, ವಾರ್ಡ್ ಅಭಿವೃದ್ಧಿ ಹಾಗೂ ಕುಂದುಕೊರತೆಗಳ ಬಗ್ಗೆ ಚರ್ಚಿಸಲು ಕರೆದಿರುವ ಸಭೆಗೆ ಆಗಮಿಸಿರುವ ಮಾನ್ಯ ವಾರ್ಡ್ ಸಮಿತಿ ಅಧ್ಯಕ್ಷರು, ಮತ್ತು ಸಮಿತಿ ಸದಸ್ಯರಿಗೆ ಸ್ವಾಗತ ಕೋರಿದರು. ಹಾಗೂ ವಾರ್ಡ್ ಸಂಖ್ಯೆ:67ರ ವಾಸ್ತವದ ಬಗ್ಗೆ ಕಿರು ಪರಿಚಯವನ್ನು ಮಂಡಿಸಿದರು.

ಮಾನ್ಯ ವಾರ್ಡ್ ಸಮಿತಿ ಅಧ್ಯಕ್ಷರು, ಮಾತನಾಡಿ ಸಮಿತಿಯ ಸದಸ್ಯರು ಮತ್ತು ಸ್ಥಳೀಯ ಸಾರ್ವಜನಿಕರು ತಮ್ಮ ತಮ್ಮ ಅವಹಾಲುಗಳನ್ನು ತಿಳಿಸಬೇಕೆಂದು ತಿಳಿಸಿದ ಹಿನ್ನೆಲೆಯಲ್ಲಿ ಸಮಿತಿಯ ಸದಸ್ಯರು ಈ ಕೆಳಕಂಡಂತೆ ವಾರ್ಡ್‌ನಲ್ಲಿ ಕಂಡುಬಂದಿರುವ ಸಮಸ್ಯೆಗಳನ್ನು ಸಭೆಗೆ ಮಂಡಿಸಿದರು.

## ಸಭೆಯಲ್ಲಿ ಚರ್ಚಿಸಲಾದ ವಿಷಯಗಳು:

| | |
|---|---|
| ಶ್ರೀ ಆಕಾಶ್<br>ವಾರ್ಡ್ ಸಮಿತಿ ಸದಸ್ಯರು. | ವಾರ್ಡ್‌ನ ಅನನ್ಯ ಆಸ್ಪತ್ರೆ ಎದುರು ಬ್ಯಾರಿಕೇಡಿಂಗ್‌ನ ಡಿವೈಡರ್ ರೀತಿ ಹಾಕುವುದರಿಂದ ವಾಹನ ಸವಾರರರಿಗೆ ಅನುಕುಲವಾಗುತ್ತದೆ. |
| ಶ್ರೀ.ವಿಶ್ವನಾಥ್<br>ನೋಡೆಲ್ ಅಧಿಕಾರಿಗಳು | ವಾರ್ಡ್ ಸವಿತಿ ಸಭೆಗೆ ಹಾಜರಾಗಿರುವ ಮಲ್ಲೇಶ್ವರಂ ಸಂಚಾರಿ ಪೋಲಿಸ್ ಠಾಣೆಯವರಿಗೆ ಕ್ರಮವಹಿಸಲು ಸೂಚಿಸಿದರು |
| ಶ್ರೀ. ಪ್ರಮೋದ್ ಕುಮಾರ್<br>ಮಲ್ಲೇಶ್ವರಂ (ಸಂಚಾರಿ ಪೋಲಿಸ್ ಠಾಣೆ) | ವಾರ್ಡ್‌ನ ನೋಡೆಲ್ ಅಧಿಕಾರಿಗಳು ಸೂಚಿಸಿರುವಂತೆ ಕ್ರಮವಹಿಸಲಾಗುವುದು ಎಂದು ಸಭೆಗೆ ಭರವಸೆ ನೀಡಿದರು. |
| ಶ್ರೀ ಉದಯ ಶಂಕರ್<br>ವಾರ್ಡ್ ಸಮಿತಿ ಸದಸ್ಯರು. | ವಾರ್ಡ್‌ನ ರಾಜಾಜಿನಗರ 1ನೇ ಆರ್ ಬ್ಲಾಕ್‌ನ 3ನೇ ಕ್ರಾಸ್‌ನ ಪ್ರಾತಕಾಂನ್ ಡಯಗ್ನಾಸ್ಟಿಕ್ ಹತ್ತಿರ ರಸ್ತೆಯಲ್ಲಿ ನೀರು ನಿಂತು ವಾಹನ ಸವಾರರಿಗೆ ಹಾಗು ರಸ್ತೆಯಲ್ಲಿ ಓಡಾಡುವವರಿಗೆ ತೊಂದರೆ ಉಂಟಾಗುತ್ತಿರುತ್ತದೆ. |
| ಶ್ರೀ ಬಿ.ಸಿ ರವಿಕುಮಾರ್<br>ಸಹಾಯಕ ಅಭಿಯಂತರರು ವಾರ್ಡ್-67 ಹಾಗು ಸಮಿತಿ ಕಾರ್ಯದರ್ಶಿಗಳು | ವಾರ್ಡ್ ಸಮಿತಿ ಸದಸ್ಯರ ದೂರಿಗೆ ಸಂಭಂದಿಸಿದಂತೆ ಕ್ರಮವಹಿಸಲಾಗುವುದಾಗಿ ಸಭೆಗೆ ಭರವಸೆ ನೀಡುತ್ತ ಮುಂದಿನ 3 ದಿವಸಗಳೊಗಾಗಿ ರಸ್ತೆಯಲ್ಲಿ ನೀರು ಸರಾಗವಾಗಿ ಹರಿಯುವಂತೆ ಮಾಡಲು ಕ್ರಮವಹಿಸಲಾಗುವುದು ಎಂದು ತಿಳಿಸಿದರು. |
| ಶ್ರೀ.ವಿಶ್ವನಾಥ್<br>ನೋಡೆಲ್ ಅಧಿಕಾರಿಗಳು | ವಾರ್ಡ್‌ನ 1ನೇ ಬ್ಲಾಕ್‌ನ ಸಿಗ್ನಲ್‌ನಲ್ಲಿ ಗ್ರೀನ್ ಸಿಗ್ನಲ್‌ನ ಸಮಯವನ್ನು ಹೆಚಿಸುವುದರಿಂದ 19ನೇ ಮೈನ್‌ನ ಟ್ರಾಫಿಕ್ ಜಾಮ್ ಕಡಿಮೆಯಾಗುತ್ತದೆ ಎಂದು ಸಭೆಯಲ್ಲಿ ಪ್ರಸ್ತಾಪಿಸಿದರು. |
| ಶ್ರೀ. ಪ್ರಮೋದ್ ಕುಮಾರ್<br>ಮಲ್ಲೇಶ್ವರಂ (ಸಂಚಾರಿ ಪೋಲಿಸ್ ಠಾಣೆ) | ವಾರ್ಡ್‌ನ ನೋಡೆಲ್ ಅಧಿಕಾರಿಗಳು ಪ್ರಸ್ತಾಪಿಸಿರುವಂತೆ ಹಿರಿಯ ಅಧಿಕಾರಿಗಳಿಗೆ ತಿಳಿಸಿ ಕ್ರಮವಹಿಸಲಾಗುವುದಾಗಿ ತಿಳಿಸಿದರು. |
| ಶ್ರೀ. ಪ್ರಮೋದ್ ಕುಮಾರ್<br>ಮಲ್ಲೇಶ್ವರಂ (ಸಂಚಾರಿ ಪೋಲಿಸ್ ಠಾಣೆ) | ವಾರ್ಡ್‌ನ ರಾಜ್‌ಕುಮಾರ್ ರಸ್ತೆಯಲ್ಲಿ ಹಲವಾರು ಗುಂಡಿಗಳಿವೆ ಹಾಗು ಬೆಂ.ಜ.ಮಂ ರವರು ಹೊಸ ಪೈಪ್ ಲೈನ್ ಅಳವಡಿಸಲು ರಸ್ತೆ ಅಗೆದು ದುರಸ್ತಿ ಮಾಡದೆ ಹಾಗೆ ಬಿಟ್ಟಿರುತ್ತಾರೆ ಇದರಿಂದ ವಾಹನ ಸವಾರರಿಗೆ ತೊಂದರೆ ಉಂಟಾಗುತ್ತಿದೆ. |

ಪು.ತಿ.ನೋ.



Scanned by CamScanner

| | |
|---|---|
| ಶ್ರೀ.ವಿಶ್ವನಾಥ್<br>ನೋಡೆಲ್ ಅಧಿಕಾರಿಗಳು | ವಾರ್ಡ್‌ನ ರಾಜ್‌ಕುಮಾರ್ ರಸ್ತೆಯು ಪ್ರಮುಖ ರಸ್ತೆಯಾಗಿರುವುದರಿಂದ ರಸ್ತೆ ಗುಂಡಿ ಮುಚ್ಚುವ ಬಗ್ಗೆ ಬಿಬಿಎಂಪಿ ರಸ್ತೆ ಮೂಲಸೌಕರ್ಯ ಕಾರ್ಯಪಾಲಕ ಅಭಿಯಂತರರಿಗೆ ದೂರವಾಣಿ ಮೂಖೇನ ತಿಳಿಸಿ ಕ್ರಮವಹಿಸಲು ಸೂಚಿಸಿದರು. |
| ಶ್ರೀ ರಾಮಚಂದ್ರ<br>1ನೇ ಎನ್ ಬ್ಲಾಕ್ ನಿವಾಸಿಗಳ<br>ಕ್ಷೇಮಾಭಿವೃಧಿ ಸಂಘ | ವಾರ್ಡ್‌ನ ರಾಜಾಜಿನಗರ 1ನೇ ಬ್ಲಾಕ್‌ನ 7ನೇ ಕ್ರಾಸ್‌ನಲ್ಲಿ ರಸ್ತೆ ಹಂಪ್ಸ್‌ಗೆ ಪೈಂಟಿಂಗ್ ಮಾಡಬೇಕು ಹಾಗು ಕ್ಯಾಟ್‌ಐಸ್ ಅಳವಡಿಸಬೇಕು ಎಂದು ಸಭೆಯಲ್ಲಿ ಪ್ರಸ್ತಾಪಿಸಿದರು. |
| ಶ್ರೀ.ವಿಶ್ವನಾಥ್<br>ನೋಡೆಲ್ ಅಧಿಕಾರಿಗಳು | ವಾರ್ಡ್‌ನ ಸಮಿತಿ ಸದಸ್ಯರ ದೂರಿಗೆ ಸಂಭಂದಿಸಿದಂತೆ ರಸ್ತೆ ಹಂಪ್ಸ್‌ಗೆ ಪೈಂಟಿಂಗ್ ಹಾಗು ಕ್ಯಾಟ್‌ಐಸ್ ಅಳವಡಿಸಲು ಟ್ರಾಫಿಕ್ ಇಂಜಿನಿಯರಿಂಗ್ ಸೆಲ್‌ಗೆ ಕ್ರಮವಹಿಸಲು ಸೂಚಿಸಿದರು. |
| ಶ್ರೀಮತಿ. ಗೀತಾ ಕೀನಾಲ್<br>ವಾರ್ಡ್ ಸಮಿತಿ ಸದಸ್ಯರು | ವಾರ್ಡ್‌ನ ರಾಜಾಜಿನಗರ 1ನೇ ಬ್ಲಾಕ್‌ನ 19ನೇ ಮೈನ್‌ನಲ್ಲಿ ಒ.ಎಫ್.ಸಿ ಕೇಬಲ್ ತೆರವುಗೊಳಿಸಬೇಕು. |
| ಶ್ರೀ ಬಿ.ಸಿ ರವಿಕುಮಾರ್<br>ಸಹಾಯಕ ಅಭಿಯಂತರರು<br>ವಾರ್ಡ್–67 | ವಾರ್ಡ್ ಸಮಿತಿ ಸದಸ್ಯರ ದೂರಿಗೆ ಸಂಭಂದಿಸಿದಂತೆ ಕ್ರಮವಹಿಸಲಾಗುವುದಾಗಿ ಸಭೆಗೆ ಭರವಸೆ ನೀಡಿದರು. |
| ಶ್ರೀ. ಮಂಜುನಾಥ್<br>ತೋಟಗಾರಿಕೆ ಇಲಾಕೆ<br>(ಮೇಸ್ತ್ರೀ) | ವಾರ್ಡ್‌ನ ವಿಶ್ವೇಶ್ವರಯ್ಯ ಉದ್ಯಾನದಲ್ಲಿ ವ್ಯಾಯಮ ಮಾಡುವ ಕೆಲವು ವಸ್ತುಗಳು ದುರಸ್ತಿಯಾಗಿದೆ ಹಾಗು ಸದರಿ ಉದ್ಯಾನದ ವಾಕಿಂಗ್ ಟ್ರಾಕ್‌ನಲ್ಲಿ ದೀಪಗಳು ಉರಿಯುತ್ತಿರುವುದಿಲ್ಲ. |
| ಶ್ರೀ ಬಿ.ಸಿ ರವಿಕುಮಾರ್<br>ಸಹಾಯಕ ಅಭಿಯಂತರರು<br>ವಾರ್ಡ್–67 | ವಾರ್ಡ್‌ನ ವಿಶ್ವೇಶ್ವರಯ್ಯ ಉದ್ಯಾನದಲ್ಲಿ ವ್ಯಾಯಮ ಮಾಡುವ ಕೆಲವು ವಸ್ತುಗಳ ದೂರಸ್ತಿಗಳ ಸಂಭಂದಿಸಿದಂತೆ ಉದ್ಯಾನದ ನಿರ್ವಹಣೆ ಮಾಡುವ ತೋಟಗಾರಿಕೆ ಇಲಾಖೆಗೆ ಹಾಗು ದೀಪಗಳ ದೂರಿಗೆ ಸಂಭಂದಿಸಿದಂತೆ ಬೀದಿ ದೀಪ ಗುತ್ತಿಗೆದಾರರು ಕ್ರಮವಹಿಸಲು ಸಭೆಗೆ ಮಾಹಿತಿ ಒದಗಿಸಿದರು. |
| ಶ್ರೀಮತಿ. ಗೀತಾ ಕೀನಾಲ್<br>ವಾರ್ಡ್ ಸಮಿತಿ ಸದಸ್ಯರು | ವಾರ್ಡ್‌ನ ರಾಜಾಜಿನಗರ 1ನೇ ಬ್ಲಾಕ್‌ನ ಕೇತ್ತ್‌ಮಾರನಹಳ್ಳಿ ಹತ್ತಿರ ನಾಯಿಗಳ ಹಾವಳಿ ಜಾಸ್ತಿಯಾಗಿದೆ ಎಂದು ಸಭೆಯಲ್ಲಿ ಪ್ರಸ್ತಾಪಿಸಿದರು. |
| ಶ್ರೀ.ವಿಶ್ವನಾಥ್<br>ನೋಡೆಲ್ ಅಧಿಕಾರಿಗಳು | ವಾರ್ಡ್‌ನ ಕೇತ್ತ್‌ಮಾರನಹಳ್ಳಿ ಹತ್ತಿರ ನಾಯಿಗಳ ದೂರಿಗೆ ಸಂಭಂದಿಸಿದಂತೆ ಪಶು ಕೆಲಸ ವಿಭಾಗದವರಿಗೆ ಕ್ರಮವಹಿಸಲು ಸೂಚಿಸಿದರು. |
| ಶ್ರೀ ರಾಮಚಂದ್ರ<br>1ನೇ ಎನ್ ಬ್ಲಾಕ್ ನಿವಾಸಿಗಳ<br>ಕ್ಷೇಮಾಭಿವೃಧಿ ಸಂಘ | ವಾರ್ಡ್‌ನ ರಾಜಾಜಿನಗರ 1ನೇ ಬ್ಲಾಕ್‌ನ ಗಣೇಶ ದೇವಾಲಯದ ಹಿಂಭಾಗದ ಪಾರ್ಕ್‌ನಲ್ಲಿ ದೀಪಗಳು ಇರುವುದಿಲ್ಲ ಎಂದು ಸಭೆಯಲ್ಲಿ ಪ್ರಸ್ತಾಪಿಸಿದರು. |
| ಶ್ರೀ ಬಿ.ಸಿ ರವಿಕುಮಾರ್<br>ಸಹಾಯಕ ಅಭಿಯಂತರರು<br>ವಾರ್ಡ್–67 | ವಾರ್ಡ್‌ನ ಸಮಿತಿ ಸದಸ್ಯರ ದೂರಿಗೆ ಸಂಭಂದಿಸಿದಂತೆ ಬೀದಿ ದೀಪ ಗುತ್ತಿಗೆದಾರರು ಕ್ರಮವಹಿಸಲು ಸೂಚಿಸಿದರು. |
| ಶ್ರೀಮತಿ. ಗೀತಾ ಕೀನಾಲ್<br>ವಾರ್ಡ್ ಸಮಿತಿ ಸದಸ್ಯರು | ವಾರ್ಡ್‌ನ ರಾಜಾಜಿನಗರ 1ನೇ ಬ್ಲಾಕ್‌ನ ಗಣೇಶ ದೇವಾಲಯದ ಹತ್ತಿರ ಆಭಾಂಡೆಡ್ ಗಾಡಿಗಳನ್ನು ತೆರವುಗೊಳಿಸಬೇಕು ಎಂದು ಸಭೆಯಲ್ಲಿ ಪ್ರಸ್ತಾಪಿಸಿದರು. |

ಪು.ತಿ.ನೋ.



Scanned by CamScanner

| | |
|---|---|
| ಶ್ರೀ.ವಿಶ್ವನಾಥ್ ನೋಡೆಲ್ ಅಧಿಕಾರಿಗಳು | ವಾರ್ಡ್‌ನ ಸಮಿತಿ ಸದಸ್ಯರ ದೂರಿಗೆ ಸಂಭಂದಿಸಿದಂತೆ ಮಲ್ಲೇಶ್ವರಂ (ಸಂಚಾರಿ ಪೋಲಿಸ್ ಠಾಣೆ)ರವರು ಕ್ರಮವಹಿಸಲು ಸೂಚಿಸಿದರು. |
| ಶ್ರೀ ಉದಯ ಶಂಕರ್ ಹಾಗು ಶ್ರೀ ರಾಮಚಂದ್ರ ವಾರ್ಡ್ ಸಮಿತಿ ಸದಸ್ಯರು. | ವಾರ್ಡ್‌ನ ರಾಜಾಜಿನಗರ 1ನೇ ಬ್ಲಾಕ್‌ನಲ್ಲಿ ಮರಗಳ ಕೊಂಭೆಗಳನ್ನು ಟ್ರಿಂಮಿಂಗ್ ಮಾಡಬೇಕು ಎಂದು ಸಭೆಯಲ್ಲಿ ಪ್ರಸ್ತಾಪಿಸಿದರು. |
| ಶ್ರೀ. ಮಲ್ಲಯ್ಯ ಅರಣ್ಯ ಇಲಾಖೆ ಗುತ್ತಿಗೆದಾರರ ಸಿಭ್ಭಂದಿ | ವಾರ್ಡ್ ಸಮಿತಿ ಸದಸ್ಯರ ದೂರಿಗೆ ಸಂಭಂದಿಸಿದಂತೆ ಕ್ರಮವಹಿಸಲಾಗುವುದಾಗಿ ಸಭೆಗೆ ಭರವಸೆ ನೀಡುತ್ತ ಮುಂದಿನ 3 ದಿವಸಗಳೊಗಾಗಿ ಮರಗಳ ಕೊಂಭೆಗಳನ್ನು ಟ್ರಿಂಮಿಂಗ್ ಮಾಡಿಕೊಡುವುದಾಗಿ ತಿಳಿಸಿದರು. |
| ಶ್ರೀ.ವಿಶ್ವನಾಥ್ ನೋಡೆಲ್ ಅಧಿಕಾರಿಗಳು | ವಾರ್ಡ್‌ನಲ್ಲಿ ಕೋವಿಡ್-19 ಪ್ರಕರಣಗಳ ಕೂರಿತು ಮಾಹಿತಿ ಕೊಡಲು ಹಿರಿಯ ಆರೋಗ್ಯ ಪರೀವಿಕ್ಷಕರಿಗೆ ತಿಳಿಸಿದರು. |
| ಶ್ರೀ. ಎಚ್ ಎಮ್ ಗಂಗಯ್ಯ ಹಿರಿಯ ಆರೋಗ್ಯ ಪರಿವೀಕ್ಷಕರು, | ವಾರ್ಡ್‌ನಲ್ಲಿ ಕೋವಿಡ್-19 ಪ್ರಕರಣಗಳು ಕಡಿಮೆ ದಾಖಲಾಗುತ್ತಿದೆ ಹಾಗು ಪ್ರತಿನಿತ್ಯಾ 18ವರ್ಷ ಮೇಲ್ಪಟ ಸಾರ್ವಜನಿಕರಿಗೆ ಲಸಿಕೆ ನೀಡುತ್ತಿರುವುದು ಚಾಲ್ತಿಯಲ್ಲಿರುತ್ತದೆ ಎಂದು ಸಭೆಗೆ ಮಾಹಿತಿ ಒದಗಿಸಿದರು. . |
| ಶ್ರೀ.ವಿಶ್ವನಾಥ್ ನೋಡೆಲ್ ಅಧಿಕಾರಿಗಳು | ವಾರ್ಡ್‌ನ ಸಣ್ಣ ವ್ಯಾಪಾರಿಗಳು ಹೆಚ್ಚಾಗಿ ಪ್ಲಾಸ್ಟಿಕ್ ಕವರ್ ಬಳಕೆ ಮಾಡುತ್ತಿರುವುದು ಕಂಡುಬಂದಿರುತ್ತದೆ ಅದರ ಬಗ್ಗೆ ಹಿರಿಯ ಆರೋಗ್ಯ ಪರಿವೀಕ್ಷಕರು ಹಾಗು ಮಾರ್ಷಲ್‌ಗಳು ಸೂಕ್ತ ಕ್ರಮ ತೆಗೆದುಕೊಳಲು ತಿಳಿಸಿದರು. |
| ಶ್ರೀ. ಎಚ್ ಎಮ್ ಗಂಗಯ್ಯ ಹಿರಿಯ ಆರೋಗ್ಯ ಪರಿವೀಕ್ಷಕರು, | ವಾರ್ಡ್‌ನ ಅಧ್ಯಕ್ಷರ ದೂರಿಗೆ ಸಂಭಂದಿಸಿದಂತೆ ಪ್ಲಾಸ್ಟಿಕ್ ಬಳಕೆ ಮಾಡುತ್ತಿರುವ ವ್ಯಾಪಾರಿಗಳ ಅಂಗಡಿಗಳ ಮೇಲೆ ರೈಡ್ ಮಾಡಿ ದಂಡ ಹಾಕಲಾಗುವುದು ಹಾಗು ಪ್ಲಾಸ್ಟಿಕ್ ಸೀಸ್ ಮಾಡಲಾಗುವುದಾಗಿ ಸಭೆಯಲ್ಲಿ ತಿಳಿಸಿದರು. |
| ಶ್ರೀ.ವಿಶ್ವನಾಥ್ ನೋಡೆಲ್ ಅಧಿಕಾರಿಗಳು | ವಾರ್ಡ್‌ನ ಕೇತಮಾರನಹಳ್ಳಿ ಎಸ್.ಬಿ.ಐ ಬ್ಯಾಂಕ್ ಹತ್ತಿರ ಸಾರ್ವಜನಿಕರು ಕಸ ಹಾಕುವುದು ನಿಯಂತ್ರಣದಲ್ಲಿರುತ್ತದೆ, ಮಾರ್ಷಲ್‌ಗಳು ಇನ್ನು ಎರೆಡು ಭಾರಿ ಪ್ಯಾಟ್ರೋಲ್ ಮಾಡಬೇಕು. |

**ಪ್ರತಿಯನ್ನು,**

1. ಮಾನ್ಯ ವಲಯ ವಿಶೇಷ ಆಯುಕ್ತರು, ಪಶ್ಚಿಮ ವಲಯ ರವರ ಅವಗಾಹನೆಗೆ ತರಲು ಆಪ್ತ ಕಾರ್ಯದರ್ಶಿರವರಿಗೆ ಸಲ್ಲಿಸಿದೆ.
2. ಮಾನ್ಯ ಜಂಟಿ ಆಯುಕ್ತರು, ಪಶ್ಚಿಮ ವಲಯ ರವರ ಅವಗಾಹನೆಗೆ ತರಲು ಆಪ್ತ ಕಾರ್ಯದರ್ಶಿರವರಿಗೆ ಸಲ್ಲಿಸಿದೆ.
3. ಮಾನ್ಯ ಮುಖ್ಯ ಅಭಿಯಂತರರು, ಪಶ್ಚಿಮ ವಲಯ ರವರ ಅವಗಾಹನೆಗೆ ಸಲ್ಲಿಸಿದೆ.
4. ಮಾನ್ಯ ಆರೋಗ್ಯ ಅಧಿಕಾರಿಗಳು, ಪಶ್ಚಿಮ ವಲಯ ರವರ ಅವಗಾಹನೆಗೆ ತರಲು ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
5. ಮಾನ್ಯ ಅಧೀಕ್ಷಕ ಅಭಿಯಂತರರು, (ಘನತ್ಯಾಜ್ಯ ನಿರ್ವಹಣೆ) ರವರ ಅವಗಾಹನ ಸಲ್ಲಿಸಿದೆ.
6. ಮಾನ್ಯ ಅರಣ್ಯಾಧಿಕಾರಿಗಳು, ಅರಣ್ಯ ವಿಭಾಗ ರವರಿಗೆ ಅವಗಾಹನೆಗೆ ತರಲು ಮತ್ತು ಅಗತ್ಯ ಕ್ರಮಕ್ಕಾಗಿ ಆಪ್ತ ಸಹಾಯಕರವರಿಗೆ ಸಲ್ಲಿಸಿದೆ.
7. ಮಾನ್ಯ ಅಧೀಕ್ಷಕರು, ತೋಟಗಾರಿಕೆ ಇಲಾಖೆ ರವರ ಅವಗಾಹನೆಗೆ ತರಲು ಹಾಗೂ ಅಗತ್ಯ ಕ್ರಮಕ್ಕಾಗಿ ಸಹಾಯಕರಿಗೆ ಸಲ್ಲಿಸಿದೆ.
8. ಆರೋಗ್ಯ ಅಧಿಕಾರಿಗಳು, (ಪಶ್ಚಿಮ ವಲಯ) ರವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
9. ಕಾರ್ಯಪಾಲಕ ಅಭಿಯಂತರರು, ಮಹಾಲಕ್ಷ್ಮೀಪುರಂ ವಿಭಾಗ ರವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
10. ಕಂದಾಯ ಅಧಿಕಾರಿಗಳು, ಮಹಾಲಕ್ಷ್ಮೀಪುರಂ ವಿಭಾಗ ರವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
11. ಸಹಾಯಕ ಕಾರ್ಯಪಾಲಕ ಅಭಿಯಂತರರು ನಾಗಪುರ ಉಪವಿಭಾಗ ರವರಿಗೆ ಸೂಕ್ತ ಕ್ರಮವಹಿಸಲು ಸಲ್ಲಿಸಿದೆ.



ಪು.ತಿ.ನೋ.

Scanned by CamScanner

12. ಸಹಾಯಕ ಕಂದಾಯ ಅಧಿಕಾರಿಗಳು ನಾಗಪುರ ಉಪವಿಭಾಗ ರವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
13. ಸಹಾಯಕ ಕಾರ್ಯಪಾಲಕ ಅಭಿಯಂತರರು (ಪರಿಸರ ವಿಭಾಗ) ನಾಗಪುರ ಉಪವಿಭಾಗ ರವರ ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
14. ಕಾರ್ಯಪಾಲಕ ಅಭಿಯಂತರರು, ವಿದ್ಯುತ್ ಪಶ್ಚಿಮ ವಿಭಾಗ ರವರಿಗೆ ಸೂಕ್ತ ಕ್ರಮ ವಹಿಸಲು ಸಲ್ಲಿಸಿದೆ.
15. ಎಲ್ಲಾ ಸಂಬಂಧಪಟ್ಟವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
16. ಕಛೇರಿಯ ಕಡತಕ್ಕೆ.

ಕಾರ್ಯದರ್ಶಿ ಹಾಗೂ
ಸಹಾಯಕ ಅಭಿಯಂತರರು, ವಾರ್ಡ್- 67
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಅಧ್ಯಕ್ಷರು ಹಾಗೂ
ನೋಡಲ್ ಅಧಿಕಾರಿಗಳು ವಾರ್ಡ್- 67
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

Scanned by CamScanner